# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 124 (51)
ಸದಸ್ಯರ ಹೆಸರು : ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 11-08-2025
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

<table>
<tr><th>ಕ್ರಮ ಸಂಖ್ಯೆ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಲ್ಯಾಣ ಕರ್ನಾಟಕ ಭಾಗದಲ್ಲಿರುವ ಪಿ.ಯು. ಕಾಲೇಜುಗಳಲ್ಲಿ ಉಪನ್ಯಾಸಕರ ಹುದ್ದೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಹೌದು ಬಂದಿದೆ.<br>ಕಲ್ಯಾಣ ಕರ್ನಾಟಕ ಭಾಗದಲ್ಲಿ ಮಂಜೂರಾದ ಉಪನ್ಯಾಸಕರ ಹುದ್ದೆಗಳ ವಿವರ ಈ ಕೆಳಗಿನಂತಿದೆ.<br><table><tr><th>ಮಂಜೂರಾದ ಹುದ್ದೆಗಳು</th><th>ಭರ್ತಿಯಾದ</th><th>ಖಾಲಿ</th></tr><tr><td>2156</td><td>1303</td><td>853</td></tr></table></td></tr>
<tr><td>ಆ)</td><td>ಬಂದಿದ್ದಲ್ಲಿ, ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ನಿರಾಸಕ್ತಿ ಹೊಂದಲು ಕಾರಣವೇನು;</td><td rowspan="2">ಕಲ್ಯಾಣ-ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ವಿವಿಧ ವಿಷಯಗಳ ಒಟ್ಟು 853 ಹುದ್ದೆಗಳ ಪೈಕಿ 36 ಹುದ್ದೆಗಳ ಭರ್ತಿಗೆ ಸರ್ಕಾರದ ಅನುಮತಿ ನೀಡಲಾಗಿರುತ್ತದೆ.<br><table><tr><th>ವಿಷಯ</th><th>ಕಲ್ಯಾಣ ಕರ್ನಾಟಕ</th></tr><tr><td>ಕನ್ನಡ</td><td>05</td></tr><tr><td>ಇಂಗ್ಲೀಷ್</td><td>05</td></tr><tr><td>ಇತಿಹಾಸ</td><td>04</td></tr><tr><td>ಅರ್ಥಶಾಸ್ತ್ರ</td><td>04</td></tr><tr><td>ವಾಣಿಜ್ಯಶಾಸ್ತ್ರ</td><td>10</td></tr><tr><td>ಸಮಾಜಶಾಸ್ತ್ರ</td><td>04</td></tr><tr><td>ರಾಜ್ಯಶಾಸ್ತ್ರ</td><td>04</td></tr><tr><td>ಒಟ್ಟು</td><td>36</td></tr></table><br>ಕಲ್ಯಾಣ-ಕರ್ನಾಟಕ ಪ್ರಾದೇಶಿಕ ಸ್ಥಳೀಯ ವೃಂದ ಮತ್ತು ರಾಜ್ಯಮಟ್ಟದ ಸ್ಥಳೀಯ ವೃಂದ ಒಳಗೊಂಡಂತೆ ಅವಶ್ಯಕವಾಗಿ ನೇಮಕಾತಿ ಮಾಡಬೇಕಾದ ನೇರ ನೇಮಕಾತಿ ಕೋಟಾದ ಒಟ್ಟು 405 ಉಪನ್ಯಾಸಕ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿ, ಆರ್ಥಿಕ ಇಲಾಖೆಯು ಸಿಬ್ಬಂದಿ ಮತ್ತು</td></tr>
<tr><td>ಇ)</td><td>ಈ ಪರಿಣಾಮ ಬಡ ವಿದ್ಯಾರ್ಥಿಗಳು ಖಾಸಗಿ ಕಾಲೇಜುಗಳತ್ತ ಮುಖ ಮಾಡಿದ್ದು ಬಡ ವಿದ್ಯಾರ್ಥಿ ಪೋಷಕರಿಗೆ ಹೆಚ್ಚಿನ ಆರ್ಥಿಕ ಹೊರೆ ತಗ್ಗಿಸಲು ಕೂಡಲೇ ಅವಶ್ಯವಿರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದೇ?</td></tr>
</table>

| | | |
|---|---|---|
| | | ಆಡಳಿತ ಸುಧಾರಣೆ ಇಲಾಖೆಯು ಹೊರಡಿಸಿರುವ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನನಿ 2024 ದಿನಾಂಕ: 25-11-2024 ರಲ್ಲಿ ನೇರ ನೇಮಕಾತಿ ಮೂಲಕ ಹುದ್ದೆಗಳ ಭರ್ತಿ ಪ್ರಸ್ತಾವನೆಗಳಿಗೆ ಸಂಬಂಧಿಸಿದಂತೆ ವಿಧಿಸಿರುವ ನಿರ್ಬಂಧವನ್ನು ಹಿಂಪಡೆದು/ತೆರವುಗೊಳಿಸಿದ ನಂತರ ಪ್ರಸ್ತಾವನೆಯನ್ನು ಸಲ್ಲಿಸಲು ತಿಳಿಸಿರುತ್ತದೆ. ಅದರಂತೆ ನೇರ ನೇಮಕಾತಿ ನಿರ್ಭಂದ ತೆರವಾದ ನಂತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮವಹಿಸಲಾಗುವುದು.<br>ಮುಂದುವರೆದು, ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಉಪನ್ಯಾಸಕರ ಹುದ್ದೆಗಳ ಎದುರಾಗಿ 2025-26 ನೇ ಶೈಕ್ಷಣಿಕ ಸಾಲಿನಲ್ಲಿ 787 ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಂಡು ಹಾಗೂ ಕಾರ್ಯಭಾರ ಕಡಿಮೆ ಇರುವ ಉಪನ್ಯಾಸಕರನ್ನು ಅಗತ್ಯವಿರುವ ಕಡೆಗೆ ನಿಯೋಜಿಸಿ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ನಿರ್ವಹಿಸಲಾಗುತ್ತಿದೆ. |

ಸಂಖ್ಯೆ: ಇಪಿ 263 ಡಿಜಿಡಬ್ಲೂ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು